ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1294.97 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

6. ಶಾಸನ ರಚನೆ :

I. ವಿಧೇಯಕವನ್ನು ಮಂಡಿಸುವುದು ಮಂಡನೆಗೆ ಅನುಮತಿ ಕೋರಿಕೆ

ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕ, 2012 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ :

2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಅಧ್ಯಕ್ಷರು : ಮಾನ್ಯ ಮುಖ್ಯಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2012ನೇ ಸಾಲಿ ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕ, 2012

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಯಿತು. ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು
ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಅಧ್ಯಕ್ಷರು : ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ